**Akashvani : Bangalore**
**Regional Bulletin In Kannada**
**09.02.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.02.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಇಂದಿನಿಂದ ಬಂಡೀಪುರ ಹುಲಿ ಸಂರಕ್ಷಿತ ಅಭಯಾರಣ್ಯದಲ್ಲಿ ಅಂತಾರಾಷ್ಟ್ರೀಯ ದೊಡ್ಡ ಬೆಕ್ಕುಗಳ ಮೈತ್ರಿ ಶೃಂಗಸಭೆ**

**೨. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಪಂದ್ಯಗಳ ಆಯೋಜನೆ ಬಗ್ಗೆ ಬುಧವಾರ ನಿರ್ಣಾಯಕ ಸಭೆ**

**೩. ಭಾರತ-ಅಮೆರಿಕ ವ್ಯಾಪಾರ ಒಪ್ಪಂದ; ಕೇಂದ್ರ ಸರ್ಕಾರದ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ**

**೪. ಮೆಟ್ರೋ ದರ ಏರಿಕೆಗೆ ತಡೆಹಿಡಿದ ಕೇಂದ್ರ ಸರ್ಕಾರ- ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ**

**<><*<><>*><>**

ಮೊದಲ 'ಅಂತಾರಾಷ್ಟ್ರೀಯ ಮಟ್ಟದ ದೊಡ್ಡ ಬೆಕ್ಕುಗಳ ಮೈತ್ರಿ ಶೃಂಗ ಸಭೆ'ಯು ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಅಭಯಾರಣ್ಯದಲ್ಲಿ ಇಂದಿನಿಂದ ಇದೇ ೧೧ರವರೆಗೆ ನಡೆಯಲಿದೆ. ಈ ಬಾರಿ ರಾಜ್ಯದ ಬಂಡೀಪುರ ಮತ್ತು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶಗಳನ್ನು ಆಯ್ಕೆ ಮಾಡಿರುವುದು ವಿಶೇಷವಾಗಿದೆ. ಭಾರತ ಸೇರಿದಂತೆ ೨೩ ದೇಶಗಳ ಪ್ರತಿನಿಧಿಗಳು ಹಾಗೂ ದೇಶದ ಎಲ್ಲಾ ರಾಜ್ಯಗಳ ಅರಣ್ಯ ಅಧಿಕಾರಿಗಳು ಮೊದಲ ಎರಡು ದಿನ ಬಂಡೀಪುರದಲ್ಲಿ ನಡೆಯುವ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲಿದ್ದಾರೆ. ೨೦೨೩ರಲ್ಲಿ ಮೈಸೂರಿನಲ್ಲಿ ಹುಲಿ ಗಣತಿ ವರದಿ ಬಿಡುಗಡೆ ವೇಳೆ ಪ್ರಧಾನಿ ನರೇಂದ್ರ ಮೋದಿ ಈ ಯೋಜನೆಯನ್ನು ಘೋಷಿಸಿದ್ದರು.

**<><*<><>*><>**

ರಾಯಲ್ ಚಾಲೆಂಜರ್ಸ್ ಬೆಂಗಳೂರು ಅಭಿಮಾನಿಗಳಿಗೆ ಮುಂದಿನ ಎರಡು ಅಥವಾ ಮೂರು ದಿನಗಳಲ್ಲಿ ಒಳ್ಳೆಯ ಸುದ್ದಿ ಸಿಗಲಿದೆ ಎಂದು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ

ಅಂತಾರಾಷ್ಟ್ರೀಯ ಪಂದ್ಯಗಳನ್ನು ಆಯೋಜಿಸುವ ಬಗ್ಗೆ ಇದೇ ೧೧ ರಂದು ನಡೆಯಲಿರುವ ನಿರ್ಣಾಯಕ ಸಭೆಯಲ್ಲಿ ರಾಜ್ಯ ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಹೇಳಿದ್ದಾರೆ. ಕೆಎಸ್‌ಸಿಎ ಕಡೆಯಿಂದ ಎಲ್ಲಾ ರೀತಿಯ ಸುರಕ್ಷತೆ ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಭರವಸೆ ನೀಡಲಾಗಿದ್ದು, ಎಲ್ಲಾ ಷರತ್ತುಗಳನ್ನು ಪೂರೈಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಕೆಎಸ್‌ಸಿಎ ಪದಾಧಿಕಾರಿಗಳು ಹಾಗೂ ಆರ್‌ಸಿಬಿ ಪ್ರತಿನಿಧಿಗಳು ತಮ್ಮನ್ನು ಭೇಟಿಯಾಗಿದ್ದು, ಬುಧವಾರದವರೆಗೆ ಸಮಯ ನೀಡಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದಕ್ಕೆ ಒಪ್ಪಿಗೆ ಸೂಚಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅಮೆರಿಕಾಗೆ ಸಂಪೂರ್ಣ ಶರಣಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಒಪ್ಪಂದದ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸುದೀರ್ಘ ಪೋಸ್ಟ್ ಹಂಚಿಕೊಂಡಿರುವ ಅವರು, ಮುಂದಿನ ದಿನಗಳಲ್ಲಿ ಈ ಒಪ್ಪಂದ ೧೪೦ ಕೋಟಿ ಭಾರತೀಯರಿಗೆ ಅದರಲ್ಲಿಯೂ ಮುಖ್ಯವಾಗಿ ದೇಶದ ೭೨ ಕೋಟಿ ರೈತರ ಪಾಲಿಗೆ ಅನ್ಯಾಯವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ದೇಶದ ಮಾರುಕಟ್ಟೆಗಳಿಗೆ ಅಮೆರಿಕದ ಅಗ್ಗದ ಆಹಾರ ಧಾನ್ಯ, ಹಣ್ಣು, ತರಕಾರಿ ಮತ್ತು ಡೈರಿ ಉತ್ಪನ್ನಗಳು ಲಗ್ಗೆ ಇಡಲಿವೆ. ಇದರಿಂದ ಭಾರತದ ರೈತರು ದಿವಾಳಿ ಸ್ಥಿತಿ ತಲುಪಲಿದ್ದಾರೆ ಎಂದು ಹೇಳಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ಇದೇ ೧೨ ರಿಂದ ೧೪ರವರೆಗೆ ಇಂಡಿಯಾ ಇಂಟರ್ ನ್ಯಾಷನಲ್ ಕಾಫಿ ಫೆಸ್ಟಿವಲ್ ನಡೆಯಲಿದೆ. ಈ ಉತ್ಸವಕ್ಕೆ ಕಾಫಿ ಮಂಡಳಿ ಬೆಂಬಲ ನೀಡಿದೆ. ಈ ಉತ್ಸವವು, ಭಾರತದ ಸಂಪೂರ್ಣ ಕಾಫಿ ಪರಿಸರ ವ್ಯವಸ್ಥೆಯನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಲಿದೆ. ಸುಮಾರು ೨೦ ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸುವ ನಿರೀಕ್ಷೆಯಿದೆ. ಕಾಫಿ ಬೆಳೆಗಾರರು, ರಫ್ತುದಾರರು, ರೋಸ್ಟರ್‌ಗಳು, ಕಾಫಿ ಬ್ರ್ಯಾಂಡ್‌ಗಳು, ಬ್ಯಾರಿಸ್ಟಾಗಳು ಹಾಗೂ ಗ್ರಾಹಕರನ್ನು ಒಂದೇ ವೇದಿಕೆಯಲ್ಲಿ ಈ ಉತ್ಸವ ಒಗ್ಗೂಡಿಸಲಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಭಾರತೀಯ ಕಾಫಿ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೂರ್ಮರಾವ್ ಮಾತನಾಡಿ, ಭಾರತೀಯ ಕಾಫಿ ತನ್ನ ಗುಣಮಟ್ಟ ಮತ್ತು ವೈವಿಧ್ಯತೆಗೆ ಹೆಚ್ಚಿನ ಮಾನ್ಯತೆ ಪಡೆಯುತ್ತಿದೆ. ಇಂತಹ ವೇದಿಕೆಗಳು ಉತ್ಪಾದಕರನ್ನು ಮಾರುಕಟ್ಟೆಗಳೊಂದಿಗೆ ಸಂಪರ್ಕಿಸಲು ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಕೂರ್ಮರಾವ್ ( ಸೆಕೆಂಡ್ಸ್ )**

**<><*<><>*><>**

ಗ್ರಾಹಕರ ಅನುಕೂಲಕ್ಕಾಗಿ ಗ್ರಾಹಕ ನ್ಯಾಯಾಲಯವು ಮೊಕದ್ದಮೆ ದಾಖಲಿಸಲು ಸಂಪೂರ್ಣವಾಗಿ ಡಿಜಿಟಲ್ ಆನ್‌ಲೈನ್ ಸೇವೆ ಒದಗಿಸುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಗ್ರಾಹಕರು, ವಕೀಲರಿಲ್ಲದೇ ನ್ಯಾಯಾಲಯದಲ್ಲಿ ವಾದ ಮಾಡಬಹುದಾಗಿದೆ ಎಂದು ಜಿಲ್ಲಾ ಗ್ರಾಹಕ ಪರಿಹಾರ ಆಯೋಗದ ಅಧ್ಯಕ್ಷೆ ನವೀನ್ ಕುಮಾರಿ ತಿಳಿಸಿದ್ದಾರೆ. ಮೈಸೂರಿನಲ್ಲಿ ನಡೆದ ಗ್ರಾಹಕ ಹಕ್ಕುಗಳ ಜಾಗೃತಿ ಕುರಿತು ಹಮ್ಮಿಕೊಂಡ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಈ ಹಿಂದೆ ಮೋಸ ಹಾಗೂ ಅನ್ಯಾಯಕ್ಕೊಳಗಾದ ಗ್ರಾಹಕರು ವಾದ ಮಾಡಲು ವಕೀಲರನ್ನು ಹುಡುಕುವ ಹಾಗೂ ನ್ಯಾಯಾಲಯಗಳಿಗೆ ಹಾಜರಾಗುವ ವ್ಯವಸ್ಥೆಯಿತ್ತು. ಆದರೆ ಇದೀಗ ಕಾನೂನು ಮಾರ್ಪಾಡಾಗಿದ್ದು, ಎಲ್ಲಾ ಮಾಹಿತಿಗಳು, ವಿಚಾರಣೆಗಳು ಹಾಗೂ ಮೊಕದ್ದಮೆಗಳು ಸಂಪೂರ್ಣವಾಗಿ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಇದರಿಂದ ಗ್ರಾಹಕರಿಗೆ ಹೆಚ್ಚಿನ ಅನುಕೂಲವಾಗಿದ್ದು, ತಮ್ಮ ಮೊಕದ್ದಮೆಯನ್ನು ತಾವೇ ವಾದಿಸಬಹುದಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ಮೆಟ್ರೋದರ ಏರಿಕೆಯನ್ನು ತಡೆಹಿಡಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ರಾಜ್ಯ ಬಿಜೆಪಿ ಘಟಕ ಸ್ವಾಗತಿಸಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ರಾಜ್ಯ ಸರ್ಕಾರವು ಈ ವಿಷಯದ ಬಗ್ಗೆ ರಾಜಕೀಯ ಮಾಡುತ್ತಿದೆ ಎಂದು ದೂರಿದ್ದಾರೆ. ಈಗಾಗಲೇ ಮೆಟ್ರೋ ದರ ಏರಿಕೆಯನ್ನು ತಡೆಹಿಡಿಯಲಾಗಿದ್ದು, ಲಕ್ಷಾಂತರ ಪ್ರಯಾಣಿಕರಿಗೆ ಪರಿಹಾರ ಖಾತರಿಪಡಿಸುವಲ್ಲಿ ತ್ವರಿತ ಹಾಗೂ ನಿರ್ಣಾಯಕ ಕ್ರಮ ಕೈಗೊಂಡಿದ್ದಕ್ಕಾಗಿ ಕೇಂದ್ರ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

**<><*<><>*><>**

ಮೆಟ್ರೊ ದರ ಎರಿಕೆ ಖಂಡಿಸಿ ಬಿಜೆಪಿ ಬೆಂಗಳೂರಿನಲ್ಲಿಂದು ಪ್ರತಿಭಟನೆ ನಡೆಸಿತು. ಈ ವೇಳೆ, ದರ ಏರಿಕೆ ಪ್ರಶ್ನಿಸಿದ ಬಿಜೆಪಿ ನಾಯಕರಾದ ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ಮುಖಂಡರನ್ನು ಪೊಲೀಸರು ಬಂಧಿಸಿದ್ದಾರೆ. ಸರ್ಕಾರದ ಆಡಳಿತವನ್ನು ಪ್ರಶ್ನಿಸಿದ ಬಿಜೆಪಿ ನಾಯಕರನ್ನು ಬಂಧಿಸಿರುವುದು ಖಂಡನೀಯ ಎಂದು ಬಿಜೆಪಿ ಸಮಾಜಿಕ ಜಾಲತಾಣದಲ್ಲಿ ತಿಳಿಸಿದೆ. ರಾಜ್ಯ ಸರ್ಕಾರದ ದಮನಕಾರಿ ನೀತಿಗಳನ್ನು ರಾಜ್ಯದ ಜನತೆ ಸಹಿಸುವುದಿಲ್ಲ ಎಂದು ತಿಳಿಸಿದೆ.

**<><*<><>*><>**

ಹಾಲಿನ ಪ್ರೋತ್ಸಾಹಧನವನ್ನು ೫ ರೂಪಾಯಿಂದ ೭ ರೂಪಾಯಿಗೆ ಹೆಚ್ಚಿಸುವ ಕುರಿತು ಚಿಂತನೆ ನಡೆದಿದೆ ಎಂದು ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನಲ್ಲಿ ನಡೆದ ತಾಲೂಕು ಮಟ್ಟದ

ಹಸುಗಳ ಹಾಲು ಕರೆಯುವ ಸ್ಪರ್ಧೆ ಹಾಗೂ ಮಿಶ್ರ ತಳಿ ಕರುಗಳ ಪ್ರದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೈನುಗಾರಿಕೆಯಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಮಹತ್ವದ ಬದಲಾವಣೆಗಳನ್ನು ತರಲು ಬಮೂಲ್ ಕಾರ್ಯೋನ್ಮುಖವಾಗಿದೆ. ರೈತರು ಯಾವುದೇ ಕಾರಣಕ್ಕೂ ಹೈನುಗಾರಿಕೆಯಿಂದ ಹಿಂದೆ ಸರಿಯಬಾರದು ಎಂದು ಸಲಹೆ ನೀಡಿದ್ದಾರೆ. ಬೇಸಿಗೆ ಹಾಗೂ ಇತರ ಕಾರಣಗಳಿಂದಾಗಿ ಬಮೂಲ್‌ನಲ್ಲಿ ಹಾಲು ಉತ್ಪಾದನೆ ೧೮ ಲಕ್ಷದಿಂದ ೧೫ ಲಕ್ಷ ಲೀಟರ್‌ಗಳಿಗೆ ಇಳಿದಿದೆ. ಹೈನುಗಾರಿಕೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ರೈತರಿಗೆ ಶೆಕಡಾ ೩ರ ಬಡ್ಡಿ ದರದಲ್ಲಿ ೧ ಲಕ್ಷದ ೬೦ ಸಾವಿರ ರೂಪಾಯಿಯಿಂದ ೧೫ ಲಕ್ಷದವರೆಗೂ ಸಾಲ ನೀಡುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಕೇಂದ್ರ ಸರಕಾರದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯ ಸೌಲಭ್ಯ ಪಡೆದುಕೊಳ್ಳಲು ಅರ್ಹರಿಗೆ ಸೂಕ್ತ ಜಾಗೃತಿ ಮೂಡಿಸುವಂತೆ ಜಿಲ್ಲಾಧಿಕಾರಿ ಡಾ. ಆನಂದ.ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿಜಯಪುರದ ನಡೆದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದ ಅವರು, ಈ ಯೋಜನೆಯಡಿ ಅಸಂಘಟಿತ ವಲಯದ ಕಾರ್ಮಿಕರನ್ನು, ಬೀದಿ ಬದಿ ವ್ಯಾಪಾರಿಗಳನ್ನು ನೋಂದಾಯಿಸಿಕೊಳ್ಳಲು ಮಾರ್ಚ್ ೧೫ರವರೆಗೆ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ೧೮ ರಿಂದ ೪೦ ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದು. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ ೫೫ ರೂಪಾಯಿಂದ ೨೦೦ ರೂಪಾಯಿವರೆಗೆ ವಂತಿಕೆ ಪಾವತಿಸಬೇಕು ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯಮಟ್ಟದ ೪೦೦ ಮೀಟರ್ ಓಟ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿದ ಕೋಲಾರ ಜಿಲ್ಲೆಯ ಮಾಲೂರಿನ ಬಿ.ಭೂಮಿಕಾ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಶಿಕ್ಷಣ ಇಲಾಖೆ ನಡೆಸಿದ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿಭಾಗದ ಕ್ರೀಡಾಕೂಟದಲ್ಲಿ ನಡೆದ ೪೦೦ ಮೀಟರ್ ಓಟ ಸ್ಪರ್ಧೆಯಲ್ಲಿ ಬಿ.ಭೂಮಿಕಾ ಪ್ರಥಮ ಸ್ಥಾನ ಪಡೆದರು. ಇದೇ ಕ್ರೀಡಾಕೂಟದ ೨೦೦ ಮೀಟರ್ ಓಟ ಸ್ಪರ್ಧೆಯಲ್ಲಿ ಅವರು ದ್ವಿತೀಯ ಸ್ಥಾನ ಪಡೆದಿದ್ದಾರೆ.

<><*<><>*><>

ಪರೀಕ್ಷಾ ಪೇ ಚರ್ಚೆಯ ೬ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಇಂದಿನ ೨ನೇ ಸಂಚಿಕೆಯಲ್ಲಿ ಪ್ರಧಾನಿಯವರು, ಒತ್ತಡ ಮತ್ತು ಆತಂಕವನ್ನು ನಿವಾರಿಸುವುದು ಹೇಗೆ ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಸಲಹೆ

ನೀಡಿದರು. ವಿದ್ಯಾರ್ಥಿಗಳು ಸಣ್ಣ ನವೋದ್ಯಮಗಳೊಂದಿಗೆ ತಮ್ಮ ಉದ್ಯಮಶೀಲ ಪ್ರಯಾಣ ಪ್ರಾರಂಭಿಸುವಂತೆ ಪ್ರೋತ್ಸಾಹಿಸಿದರು. ದೊಡ್ಡ ಕೆಲಸಗಳು ಸಾಮಾನ್ಯವಾಗಿ ಚಿಕ್ಕ ಆರಂಭದಿಂದ ಬೆಳೆಯುತ್ತದೆ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ಶೈಕ್ಷಣಿಕ ಮತ್ತು ಸೃಜನಶೀಲ ಅನ್ವೇಷಣೆಗಳನ್ನು ಪ್ರತ್ಯೇಕವಾಗಿ ನೋಡಬಾರದು, ಎರಡೂ ಸಮಾನವಾಗಿ ಮೌಲ್ಯಯುತವಾಗಿವೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಒತ್ತಡದಿಂದ ಉಂಟಾಗುವ ಆಯಾಸವನ್ನು ನಿವಾರಿಸಲು ಕಲೆ ಮತ್ತು ಸೃಜನಶೀಲ ಹವ್ಯಾಸಗಳು ಸಹಾಯ ಮಾಡುತ್ತವೆ ಎಂದು ಸಲಹೆ ನೀಡಿದರು. ರಸ್ತೆಗಳಲ್ಲಿ ಕಸ ಹಾಕದಿರುವುದು, ಉಗುಳದಿರುವುದು, ಸಂಚಾರ ನಿಯಮವನ್ನು ಪಾಲಿಸುವುದು ಮತ್ತು ಆಹಾರ ವ್ಯರ್ಥ ಮಾಡುವುದನ್ನು ತಪ್ಪಿಸುವುದು ಮುಂತಾದ ಮೂಲಭೂತ ನಿಯಮಗಳನ್ನು ಪಾಲಿಸುವಂತೆ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**